# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ¨sÀUÀ 4 J<br>Part – IVA | ಬೆಂಗಳೂರು, ಬುಧವಾರ,15, ಜುಲೈ, 2020 (ಆಷಾಢ ,24,ಶಕವರ್ಷ ೧೯೪2)<br>Bengaluru, WEDNESDAY, 15, JULY, 2020 (Ashadha,24,ShakaVarsha 1942) | ನಂ. 291<br>No. 291 |


## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 26 ಎಸ್‌ಸಿಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:15.07.2020

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978ರ (1990ರ ಕರ್ನಾಟಕ ಅಧಿನಿಯಮ 14) 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ, ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) (ತಿದ್ದುಪಡಿ) ನಿಯಮಗಳು, 2020ರ ಕರಡನ್ನು ಅಧಿಸೂಚನೆ ಸಂಖ್ಯೆ: ಸಿಆಸುಇ 26 ಎಸ್‌ಸಿಆರ್ 2020, ದಿನಾಂಕ:19-06-2020 ಅನ್ನು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆ ಭಾಗ-IV-ಎ (ಸಂಖ್ಯೆ:210), ದಿನಾಂಕ:19-06-2020ರ ಪ್ರಕಟಿಸಿದ್ದು ಅಧಿಕೃತ ರಾಜ್ಯಪತ್ರದಲ್ಲಿ ಕರಡನ್ನು ಪ್ರಕಟಿಸಿದ ದಿನಾಂಕದಿಂದ ಹದಿನೈದು ದಿನಗಳೊಳಗೆ ಇದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿರುವುದರಿಂದ.

ಸದರಿ ರಾಜ್ಯಪತ್ರವನ್ನು ದಿನಾಂಕ:19-06-2020ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ರಾಜ್ಯ ಸರ್ಕಾರವು ಸದರಿ ಕರಡಿನ ಸಂಬಂಧದಲ್ಲಿ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸ್ವೀಕರಿಸಿಲ್ಲದಿರುವುದರಿಂದ;

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ14)ರ 8ನೇ ಪ್ರಕರಣದೊಂದಿಗೆ ಓದಲಾದ 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಮುಂದಿನ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) (ತಿದ್ದುಪಡಿ) ನಿಯಮಗಳು, 2020 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿಅಂತಿಮವಾಗಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 2ರ ತಿದ್ದುಪಡಿ:-**ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು 2000 (ಇನ್ನು ಮುಂದೆ ಸದರಿ ನಿಯಮಗಳು ಎಂದು ಕರೆಯಲ್ಪಡುವ) ನಿಯಮ 2ರ ಉಪ ನಿಯಮ (1)ರ ಖಂಡ (ಇ)ರಲ್ಲಿ "ವೃಂದ ಬಿ ಮತ್ತು ಸಿ ನೌಕರರಿಗೆ ಸಂಬಂಧಿಸಿದಂತೆ" ಎಂಬ ಪದಗಳಿಗೆ ಬದಲಾಗಿ "ಅಥವಾ ಸರ್ಕಾರವು ನಿರ್ದಿಷ್ಟಪಡಿಸಿದ ಗ್ರೂಪ್-ಬಿ ಮತ್ತು ಸಿ ಅಧಿಕಾರಿಗಳ ವರ್ಗಕ್ಕೆ ಸಂಬಂಧಿಸಿದಂತೆ ವಿದ್ಯುನ್ಮಾನವಾಗಿ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**3. ನಿಯಮ 3ರ ತಿದ್ದುಪಡಿ:-**ಸದರಿ ನಿಯಮಗಳ ನಿಯಮ 3ರ ಉಪ ನಿಯಮ (2)ರ ಖಂಡ (ಎ)ರಲ್ಲಿ "ವೃಂದ ಬಿ ಮತ್ತು ಸಿ ನೌಕರರಿಗೆ ಸಂಬಂಧಿಸಿದಂತೆ" ಎಂಬ ಪದಗಳಿಗೆ ಬದಲಾಗಿ "ಅಥವಾ ಸರ್ಕಾರವು ನಿರ್ದಿಷ್ಟಪಡಿಸಿದ ಗ್ರೂಪ್-ಬಿ ಮತ್ತು ಸಿ ಅಧಿಕಾರಿಗಳ ವರ್ಗಕ್ಕೆ ಸಂಬಂಧಿಸಿದಂತೆ ವಿದ್ಯುನ್ಮಾನವಾಗಿ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**4. ನಿಯಮ 4ರ ತಿದ್ದುಪಡಿ:-**ಸದರಿ ನಿಯಮಗಳು ನಿಯಮ 4ರ ಉಪ ನಿಯಮ (1)ರಲ್ಲಿ "ವೃಂದ ಬಿ ಮತ್ತು ಸಿ ನೌಕರರಿಗೆ ಸಂಬಂಧಿಸಿದಂತೆ" ಎಂಬ ಪದಗಳಿಗೆ ಬದಲಾಗಿ

"ಅಥವಾ ಸರ್ಕಾರವು ನಿರ್ದಿಷ್ಟಪಡಿಸಿದ ಗ್ರೂಪ್-ಬಿ ಮತ್ತು ಸಿ ಅಧಿಕಾರಿಗಳ ವರ್ಗಕ್ಕೆ ಸಂಬಂಧಿಸಿದಂತೆ ವಿದ್ಯುನ್ಮಾನವಾಗಿ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತುಅವರ ಹೆಸರಿನಲ್ಲಿ

(ಉಮಾ ವರದಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು)

**GOVERNMENT OF KARNATAKA**

No. DPAR 26 SCR 2020

Karnataka Government Secretariat,
VidhanaSoudha,
Bengaluru, dated:15.07.2020

**NOTIFICATION**

Whereas the draft of the Karnataka Civil Services (Performance Reports) (Amendment) Rules, 2020, was published as required by clause (a) of sub-section (2) of Section 3 read with Section 8 of the Karnataka State Civil Services Act, 1978 (Karnataka Act 14 of 1990) in Notification No. DPAR 26 SCR 2020 dated: 19.06.2020 in Part IV-A (No-210) of the Karnataka Gazette Extraordinary dated: 19.06.2020 inviting objections and suggestions from all persons likely to be affected thereby within fifteen days from the date of publication of the draft in the Official Gazette.

Whereas, the said Gazette was made available to the public on 19.06.2020

And whereas, no objections and suggestions have been received in this behalf by the State Government.

Now, therefore, in exercise of the powers conferred by sub-section (1) of Section 3 read with Section 8 of the Karnataka State Civil Services Act, 1978

(Karnataka Act 14 of 1990), the Government of Karnataka hereby makes the following rules, namely;

## RULES

1. **Title and Commencement.-**(1) These rules may be called the Karnataka Civil Services (Performance Reports) (Amendment) Rules, 2020

(2) They shall come into force from the date of their final publication in the Official Gazette.

**2. Amendment of Rule 2.-** In the Karnataka Civil Services (Performance Reports) Rules, 2000 (hereinafter referred to as the said rules), in rule 2, in sub-rule (1),in clause (e), for the words, "in respect of Group-B and C officials" the words "or electronically in respect of such category of Group-B and C officials as specified by the Government" shall be substituted.

**3. Amendment of Rule 3.-**In rule 3 of the said rules, in sub rule (2), in clause (a), for the words, "in respect of Group-B and C officials" the words "or electronically in respect of such category of Group-B and C officials as specified by the Government" shall be substituted.

**4. Amendment of Rule 4.-**In rule 4 of the said rules, in sub rule (1), for the words, "in respect of Group-B and C officials" the words "or electronically in respect of such category of Group-B and C officials as specified by the Government" shall be substituted.

By Order and in the name of the
Governor of Karnataka

(UMA VARADAIAH)
Under Secretary to Government
Department of Personnel and
Administrative Reforms
(Service Rules-1)

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE